# Akashvani: Bangalore
# Regional Bulletin In Kannada
# 01.07.2026: 18.40hrs

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

**ಮುಖ್ಯಾಂಶಗಳು :**

1. ರಾಜ್ಯದಲ್ಲಿ ಮೋಡ ಬಿತ್ತನೆಗೆ ಚಿಂತನೆಯಿಲ್ಲ ; ಬರ ನಿರ್ವಹಣೆಗೆ ಹೆಚ್ಚಿನ ಆದ್ಯತೆ - ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್
2. ಪತ್ರಕರ್ತರು ವೃತ್ತಿ ಪರತೆಯಿಂದ ಕಾರ್ಯ ನಿರ್ವಹಿಸುವಂತೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಲಹೆ
3. ಚಾಮುಂಡಿ ಬೆಟ್ಟದಲ್ಲಿ ಆಷಾಢ ಶುಕ್ರವಾರದಂದು ಭಕ್ತರಿಗೆ ಸುಲಲಿತ ದರ್ಶನಕ್ಕೆ ವ್ಯವಸ್ಥೆ ಮಾಡುವಂತೆ ಸಚಿವ ಯತೀಂದ್ರ ಸಿದ್ದರಾಮಯ್ಯ ಸೂಚನೆ
4. ಅರ್ಹ ಫಲಾನುಭವಿಗಳಿಗೆ ಗೃಹಜ್ಯೋತಿ ಯೋಜನೆ ಮುಂದುವರಿಯಲಿದೆ - ಇಂಧನ ಸಚಿವ ಕೆ.ಜೆ.ಜಾರ್ಜ್ ಸ್ಪಷ್ಟನೆ
5. ರಾಜ್ಯದಲ್ಲಿ ನಡೆಯುತ್ತಿರುವ ಎಸ್‌ಐಆರ್‌ನಲ್ಲಿ ಅಧಿಕಾರಿಗಳು ನಿಷ್ಪಕ್ಷಪಾತವಾಗಿ ಕಾರ್ಯನಿರ್ವಹಿಸುವಂತೆ ಸಂಸದ ಬಸವರಾಜ ಬೊಮ್ಮಾಯಿ ಆಗ್ರಹ

**********

ಕಂದಾಯ ಇಲಾಖೆಯಲ್ಲಿ ಪೌತಿ ಖಾತೆ, ಹಕ್ಕು ಪತ್ರ ವಿತರಣೆ, ಆಕಾರ್ ಬಂದ್, ಕಂದಾಯ ಗ್ರಾಮಗಳ ಘೋಷಣೆ ಮೂರು ವರ್ಷಗಳಿಂದ ಯಶಸ್ವಿಯಾಗಿ ನಡೆಯುತ್ತಿದ್ದು, ಕಾಲಮಿತಿಯೊಳಗೆ ಪೂರ್ಣಗೊಳಿಸುವುದಾಗಿ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ. ಬೆಳಗಾವಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಳಗಾವಿ ಜಿಲ್ಲೆಯಲ್ಲಿ ಬರದ ಛಾಯೆ ಕಾಣಿಸುತ್ತಿದ್ದು, ಕುಡಿಯುವ ನೀರಿನ ಸಮರ್ಪಕ ಪೂರೈಕೆಗೆ ಸೂಚನೆ ನೀಡಲಾಗಿದೆ ಎಂದು ಹೇಳಿದ್ದಾರೆ. ರಾಜ್ಯದಲ್ಲಿ ಬರ ಘೋಷಣೆ ಕುರಿತಂತೆ ಪ್ರತಿಕ್ರಿಯಿಸಿದ ಉಪಮುಖ್ಯಮಂತ್ರಿ, ಬರ ತಾಲ್ಲೂಕು ಅಥವಾ ಜಿಲ್ಲೆ ಎಂದು ಘೋಷಣೆ ಮಾಡಲು ಮಾನದಂಡಗಳಿದ್ದು, ಈ ಬಗ್ಗೆ ಚರ್ಚೆ ನಡೆದಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ. ಇದೇ ವೇಳೆ ಸರ್ಕಾರ ರಾಜ್ಯದಲ್ಲಿ ಬರ ನಿರ್ವಹಣೆ ಬಗ್ಗೆ ಆದ್ಯತೆ ನೀಡಿದ್ದು, ಮೋಡ ಬಿತ್ತನೆ ಬಗ್ಗೆ ಚಿಂತಿಸಿಲ್ಲ ಎಂದು ತಿಳಿಸಿದ್ದಾರೆ.

**********

ನಿರ್ಭೀತಿಯ ಪತ್ರಿಕಾವೃತ್ತಿ ಅತ್ಯಂತ ಸವಾಲಿನ ಕೆಲಸವಾಗಿದ್ದು, ವೃತ್ತಿಪರತೆ ಇಂದಿನ ಅಗತ್ಯವಾಗಿದೆ ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಕರ್ನಾಟಕ ಮಾಧ್ಯಮ ಅಕಾಡೆಮಿ ಹಾಗೂ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಆಯೋಜಿಸಿದ್ದ ಪತ್ರಿಕಾ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸುಳ್ಳು ಸುದ್ದಿಗಳನ್ನು ಪ್ರಕಟಿಸದಂತೆ ಹಾಗೂ ಪ್ರಸಾರ ಮಾಡದಂತೆ ಮನವಿ ಮಾಡಿದ್ದಾರೆ. ಪ್ರತಿಯೊಂದು ಸುದ್ದಿಯಲ್ಲೂ ಸತ್ಯ ಮತ್ತು ಪ್ರಾಮಾಣಿಕತೆ ಇರಬೇಕು ಎಂದು ಸಲಹೆ ನೀಡಿದ್ದಾರೆ.

**********

ಆಷಾಢ ಮಾಸದಲ್ಲಿ ಶುಕ್ರವಾರದಂದು ಚಾಮುಂಡಿ ಬೆಟ್ಟದಲ್ಲಿ ಭಕ್ತರಿಗೆ ಯಾವುದೇ ಅನಾನುಕೂಲವಾಗದಂತೆ ಚಾಮುಂಡಿ ದೇವಿಯ ದರ್ಶನಕ್ಕೆ ವ್ಯವಸ್ಥೆ ಮಾಡುವಂತೆ ಮೈಸೂರು ಜಿಲ್ಲಾ ಉಸ್ತುವಾರಿ ಸಚಿವ ಯತೀಂದ್ರ ಸಿದ್ದರಾಮಯ್ಯ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಚಾಮುಂಡಿ ಬೆಟ್ಟದ ದಾಸೋಹ ಭವನದಲ್ಲಿಂದು ಆಷಾಢ ಶುಕ್ರವಾರ ಸಂಬಂಧ ಹಮ್ಮಿಕೊಂಡಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ದರ್ಶನಕ್ಕೆ ಬರುವ ಭಕ್ತರ ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಯಾವುದೇ ಕಾಲ್ತುಳಿತ ಆಗದಂತೆ ಎಚ್ಚರಿಕೆ ವಹಿಸಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಚಾಮುಂಡಿ ಬೆಟ್ಟದಲ್ಲಿ ಪಾಸ್ಟಿಕ್ ನಿಷೇಧಿಸುವಂತೆ ಹಾಗೂ ದೇವಸ್ಥಾನದ ಬಳಿ ೩ ಆಂಬುಲೆನ್ಸ್ ವ್ಯವಸ್ಥೆ ಮಾಡುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ.

**********

ರಾಜ್ಯ ಸರ್ಕಾರದ ಮಹಾತ್ವಕಾಂಕ್ಷಿ ಯೋಜನೆಗಳಲ್ಲೊಂದಾದ ಗೃಹ ಜ್ಯೋತಿ ಯೋಜನೆಯ ಫಲಾನುಭವಿಗಳ ಮನೆ-ಮನೆ ಪರಿಶೀಲನೆ ಕಾರ್ಯವನ್ನು ಇಂದಿನಿಂದ ಎಸ್ಕಾಂಗಳ ಸಿಬ್ಬಂದಿ ಕೈಗೊಂಡಿದ್ದಾರೆ. ಎಸ್ಕಾಂಗಳ ಮೀಟರ್ ರೀಡರ್‌ಗಳು ಹಾಗೂ ಎಸ್ಕಾಂ ಸಿಬ್ಬಂದಿ ಗ್ರಾಹಕರ ಮನೆಗಳಿಗೆ ಭೇಟಿ ನೀಡಿ, ಫಲಾನುಭವಿಗಳ ದಾಖಲೆ ಪರಿಶೀಲನೆ ನಡೆಸಿ ಅವರ ಮಾಹಿತಿ ಸಂಗ್ರಹಿಸಲಿದ್ದಾರೆ. ಮೊಬೈಲ್ ಆಪ್ ಹಾಗೂ ಘೋಷಣಾ ಪತ್ರ ಮೂಲಕ ಅರ್ಜಿ ಭರ್ತಿ ಪ್ರಕ್ರಿಯೆ ಪೂರ್ಣಗೊಳಿಸಲಿದ್ದಾರೆ. ಎಸ್ಕಾಂ ಸಿಬ್ಬಂದಿ ಮನೆ-ಮನೆ ಭೇಟಿ ಸಂದರ್ಭದಲ್ಲಿ ಆಧಾರ್ ಕಾರ್ಡ್, ಫಲಾನುಭವಿಯ ಪಾಸ್ ಪೋರ್ಟ್ ಅಳತೆಯ ಭಾವಚಿತ್ರ, ಮತದಾರರ ಗುರುತಿನ ಚೀಟಿ, ಪ್ಯಾನ್ ಕಾರ್ಡ್, ಬಾಡಿಗೆ ಒಪ್ಪಂದದ ಪತ್ರಗಳು, ರೇಷನ್ ಕಾರ್ಡ್ ಹಾಗೂ ಜಾತಿ ಪ್ರಮಾಣ ಪತ್ರವನ್ನು ತೋರಿಸಲು ಕೋರಲಾಗಿದೆ. ಗ್ರಾಹಕರು ಮತ್ತು ಫಲಾನುಭವಿಗಳು ಮೀಟರ್ ರೀಡರ್‌ಗಳಿಗೆ ಸಂಪೂರ್ಣ ಸಹಕಾರ ನೀಡಿ, ಪರಿಶೀಲನೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಇಂಧನ ಇಲಾಖೆ ಮನವಿ ಮಾಡಿದೆ.

**********

ರಾಜ್ಯ ಸರ್ಕಾರ ಗೃಹ ಜ್ಯೋತಿ ಉಚಿತ ವಿದ್ಯುತ್ ಬಳಕೆದಾರರ ಮಾಹಿತಿಗಳನ್ನು ಪಡೆಯಲು ಮುಂದಾಗಿದ್ದು ಈ ವಿಷಯದಲ್ಲಿ ಜನರು ಗೊಂದಲಕ್ಕೀಡಾಗುವುದು ಬೇಡ ಎಂದು ಇಂಧನ ಖಾತೆ ಸಚಿವ ಕೆ.ಜೆಜಾರ್ಜ್ ತಿಳಿಸಿದ್ದಾರೆ. ಚಿಕ್ಕಮಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಅರ್ಹ ಫಲಾನುಭವಿಗಳಿಗೆ ಗೃಹ ಜ್ಯೋತಿ ಯೋಜನೆ ಮುಂದುವರಿಯಲಿದೆ. ಅನರ್ಹರು ಇದ್ದರೆ ಯೋಜನೆಯಿಂದ ಕೈಬಿಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಈ ಯೋಜನೆಯ ಪರಿಶೀಲನೆಗೆ ನೀಡುವ ಅರ್ಜಿಗಳನ್ನು ಜನರು ಭರ್ತಿ ಮಾಡಿ ಎಸ್ಕಾಂ ಅಧಿಕಾರಿಗಳಿಗೆ ನೀಡುವಂತೆ ಮನವಿ ಮಾಡಿದ್ದಾರೆ.

**********

ಮಂಗಳೂರಿನ ನಾಗುರಿಯಲ್ಲಿ ತಡೆಗೋಡೆ ಕುಸಿದು ಮೃತಪಟ್ಟ ಕುಟುಂಬಗಳಿಗೆ ೫ ಲಕ್ಷ ರೂಪಾಯಿ ಪರಿಹಾರ ವಿತರಿಸಲಾಗುವುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ಸಚಿವ ಯು.ಟಿ.ಖಾದರ್ ತಿಳಿಸಿದ್ದಾರೆ. ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಮಾತನಾಡಿದ ಅವರು, ಗಾಯಾಳುಗಳಿಗೆ ಸರ್ಕಾರದ ವತಿಯಿಂದ ಉಚಿತವಾಗಿ ಚಿಕಿತ್ಸೆ ನೀಡಲಾಗುವುದು ಎಂದು ಹೇಳಿದ್ದಾರೆ. ನಿಯಮಾನುಸಾರ ಒಂದು ಲಕ್ಷದ ೯೦ ಸಾವಿರ ರೂಪಾಯಿ ಮನೆಯ ಪರಿಹಾರ ಮೊತ್ತವನ್ನು ಶೀಘ್ರವೇ ವಿತರಿಸಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ.

**********

ರಾಜ್ಯದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆಯಲ್ಲಿ ಭಾಗಿಯಾಗಿರುವ ಅಧಿಕಾರಿಗಳು ನಿಷ್ಪಕ್ಷಪಾತವಾಗಿ ಕಾರ್ಯ ನಿರ್ವಹಿಸಬೇಕು ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಆಗ್ರಹಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಿಎಲ್‌ಒಗಳು ಯಾವುದೇ ರಾಜಕೀಯ ಒತ್ತಡಕ್ಕೆ ಮಣಿಯಬಾರದು ಎಂದು ಒತ್ತಾಯಿಸಿದ್ದಾರೆ. ಯಾವುದೇ ಅರ್ಹ ಮತದಾರರನ್ನು ಹೊರಗಿಡದಂತೆ ಖಚಿತಪಡಿಸಿಕೊಳ್ಳಬೇಕು ಎಂದು ತಿಳಿಸಿದ್ದಾರೆ.

**********

ಅಕ್ಟೋಬರ್ ವೇಳೆಗೆ ತುಮಕೂರು ಜಿಲ್ಲೆಯವರೆಗೆ ಎತ್ತಿನಹೊಳೆ ನೀರು ಹರಿಯಲಿದೆ ಎಂದು ಜಲಸಂಪನ್ಮೂಲ ಸಚಿವ ರಾಮಲಿಂಗಾರೆಡ್ಡಿ ತಿಳಿಸಿದ್ದಾರೆ. ಎತ್ತಿನಹೊಳೆ ಯೋಜನೆ ಕಾಮಗಾರಿ ಪರಿಶೀಲನೆ ಸಂಬಂಧ ಜಿಲ್ಲೆಯ ಗುಬ್ಬಿ ತಾಲ್ಲೂಕಿನ ಕಂಚಿಗಾನಹಳ್ಳಿ, ಮಾರಶೆಟ್ಟಿಹಳ್ಳಿ ಅರಣ್ಯ ಪ್ರದೇಶಕ್ಕೆ ಭೇಟಿ ನೀಡಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮಹತ್ವದ ಎತ್ತಿನಹೊಳೆ ಯೋಜನೆ ಕಾಮಗಾರಿ ಒಟ್ಟು ೨೫೨ ಕಿಲೋಮೀಟರ್ ಇದ್ದು, ಈಗಾಗಲೇ ೨೨೦ ಕಿಲೋಮೀಟರ್ ಕಾಮಗಾರಿ ಪೂರ್ಣಗೊಂಡಿದೆ. ೨೩ ಕಿಲೋಮೀಟರ್ ಕಾಮಗಾರಿ ಪ್ರಗತಿಯಲ್ಲಿದೆ ಎಂದು ಮಾಹಿತಿ ನೀಡಿದ್ದಾರೆ. ಬಾಕಿ ೯ ಕಿಲೋಮೀಟರ್ ಕಾಮಗಾರಿ ವ್ಯಾಪ್ತಿಯಲ್ಲಿ ೬ ಕಿಲೋಮೀಟರ್ ಅರಣ್ಯ ಪ್ರದೇಶ ಇದ್ದುದರಿಂದ ಕಾಮಗಾರಿ ವಿಳಂಬಕ್ಕೆ ಕಾರಣವಾಗಿದೆ. ಇದೀಗ ಕೇಂದ್ರ ಸರ್ಕಾರ ಪ್ರಕರಣವನ್ನು ಇತ್ಯರ್ಥಗೊಳಿಸಿದ್ದು, ಕಾಮಗಾರಿ ಪೂರ್ಣಗೊಂಡು ಅಕ್ಟೋಬರ್ ವೇಳೆಗೆ

ತುಮಕೂರಿನವರೆಗೆ ಎತ್ತಿನಹೊಳೆ ನೀರು ಹರಿಸುವ ಎಲ್ಲಾ ಸಾಧ್ಯತೆಗಳಿವೆ ಎಂದು ತಿಳಿಸಿದ್ದಾರೆ. ಮುಂದಿನ ೧೦೦ ದಿನಗಳಲ್ಲಿ ಒಟ್ಟಾರೆ ೧೭೪ ಕಿಲೋಮೀಟರ್ ಕಾಮಗಾರಿ ಪೂರ್ಣಗೊಳಿಸಲು ಗುತ್ತಿಗೆದಾರರಿಗೆ ಸೂಚಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

**********

ಬೆಂಗಳೂರಿನ ಜಿಬಿಎ ವ್ಯಾಪ್ತಿಯ ಐದು ನಗರ ಪಾಲಿಕೆಗಳಲ್ಲಿ ಸುರಕ್ಷಿತ ಪಾದಚಾರಿ ಮಾರ್ಗ ಅಭಿಯಾನದ ಅಂಗವಾಗಿ ಒತ್ತುವರಿ ತೆರವು ಕಾರ್ಯಾಚರಣೆ ಆರಂಭಗೊಂಡಿದೆ. ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣಭೈರೇಗೌಡ ಹಾಗೂ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ನಿರ್ದೇಶನದಂತೆ ಪಾದಚಾರಿ ಮಾರ್ಗಗಳಲ್ಲಿದ್ದ ಅಡೆತಡೆಗಳನ್ನು ತೆರವುಗೊಳಿಸಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡಲಾಗಿದೆ. ಸರ್ಕಾರದ ಈ ಅಭಿಯಾನಕ್ಕೆ ವ್ಯಾಪಾರಿಗಳು ಸಾರ್ವಜನಿಕರು ಹಾಗೂ ಎಲ್ಲಾ ವಾಣಿಜ್ಯ ಸಂಸ್ಥೆಗಳು ಕೈಜೋಡಿಸಬೇಕು ಎಂದು ಗ್ರೇಟರ್ ಬೆಂಗಳೂರು ಅಭಿವೃದ್ಧಿ ಸಚಿವ ಕೃಷ್ಣಭೈರೇಗೌಡ ಮನವಿ ಮಾಡಿದ್ದಾರೆ. ಸರ್ಕರದ ಅಭಿಯಾನ ನಾಗರಿಕರ ಸಹಭಾಗಿತ್ವದ ಜನಾಂದೋಲನವಾಗಬೇಕು ಎಂದು ಕರೆ ನೀಡಿದ್ದಾರೆ.

**********

ಮಂಡ್ಯ ಜಿಲ್ಲೆಯಲ್ಲಿ ಮುಂಗಾರು ಮಳೆಯ ವೈಪರೀತ್ಯದಿಂದ ರೈತರಿಗೆ ನಷ್ಟ ತಡೆಗಟ್ಟಲು ಪರ್ಯಾಯ ಬೆಳೆಗಳನ್ನು ಬೆಳೆಯುವ ಬಗ್ಗೆ ಅರಿವು ಮೂಡಿಸುವಂತೆ ಜಿಲ್ಲಾಧಿಕಾರಿ ಡಾ ಕುಮಾರ ತಿಳಿಸಿದ್ದಾರೆ. ಮುಂಗಾರು ಹಂಗಾಮಿನಲ್ಲಿ ರೈತರಿಗೆ ಬಿತ್ತನೆ ಬೀಜ ವಿತರಣೆ ಹಾಗೂ ಪರ್ಯಾಯ ಬೆಳೆ ಬೆಳೆಯುವ ಸಂಬಂಧ ಸಭೆ ನಡೆಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಒಟ್ಟು ಬಿತ್ತನೆ ಗುರಿಯ ಪೈಕಿ ಶೇಕಡಾ ೫೫ರಷ್ಟು ಪ್ರದೇಶದಲ್ಲಿ ಮಾತ್ರ ಬಿತ್ತನೆಯಾಗಿದ್ದು ಮಳೆಯ ಕೊರತೆಯಿಂದಾಗಿ ಬಿತ್ತನೆ ಕಾರ್ಯವು ನಿಧಾನಗತಿಯಲ್ಲಿದೆ ಎಂದು ಹೇಳಿದ್ದಾರೆ.ಭತ್ತಕ್ಕೆ ಪರ್ಯಾಯವಾಗಿ ರಾಗಿ, ನವಣೆ ಮುಸಕಿನಜೋಳ, ಅರ್ಕ, ಹುರುಳಿ, ಅಲಸಂದೆ, ಸೂರ್ಯಕಾಂತಿ ಬೆಳೆಯಲು ಕೃಷಿ ಇಲಾಖೆಯಿಂದ ರೈತರಿಗೆ ಅರಿವು ಮೂಡಿಸುವಂತೆ ನಿರ್ದೇಶನ ನೀಡಿದ್ದಾರೆ.

**********

ಧಾರವಾಡದ ಕರ್ನಾಟಕ ವೈದ್ಯಕೀಯ ವಿಜ್ಞಾನ ಮತ್ತು ಸಂಶೋಧನಾ ಸಂಸ್ಥೆಯು ೫೫ ವರ್ಷದ ಮಹಿಳೆಯ ಎಡಗಾಲಿನ ಮೊಣಕಾಲು ಕೀಲು ಬದಲಿ ರೊಬೋಟಿಕ್ ಶಸ್ತ್ರಚಿಕಿತ್ಸೆಯನ್ನು ಯಶಸ್ವಿಯಾಗಿ ನಡೆಸಿದೆ. ಸರ್ಕಾರಿ ವೈದ್ಯಕೀಯ ಕಾಲೇಜುಗಳ ಇತಿಹಾಸದಲ್ಲೇ ಮೊದಲ ಬಾರಿಗೆ ಶಸ್ತ್ರಚಿಕಿತ್ಸೆಯನ್ನು ಯಶಸ್ವಿಗೊಳಿಸಲಾಗಿದೆ ಎಂದು ಸಂಸ್ಥೆಯ ನಿರ್ದೇಶಕ ಡಾ.ಕೆ.ಎಫ್.ಕಮ್ಮಾರ ತಿಳಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ೨ ಕೋಟಿ ೭೯ ಲಕ್ಷ ರೂಪಾಯಿ ಮೊತ್ತದ ರೋಬೋಟಿಕ್ ಕೇಂದ್ರ ಖರೀದಿಸಲಾಗಿದ್ದು, ಈ ಶಸ್ತ್ರಚಿಕಿತ್ಸೆಯನ್ನು ಎರಡರಿಂದ ಎರಡೂವರೆ ಗಂಟೆಯಲ್ಲಿ ಪೂರ್ಣಗೊಳಿಸಲಾಗಿದೆ ಎಂದು ತಿಳಿಸಿದ್ದಾರೆ. ಸರ್ಕಾರಿ ಆಸ್ಪತ್ರೆಯಲ್ಲಿ ಮೊದಲ ಬಾರಿಗೆ ರೊಬೋಟಿಕ್ ಸರ್ಜರಿ ಮಾಡಿರುವುದು ಸಂತಸ ತಂದಿದೆ ಎಂದು ಹೇಳಿದ್ದಾರೆ.

**********

ಪುನರ್‌ರಚಿಸಲಾದ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯಡಿಯಲ್ಲಿ ೨೦೨೫-೨೭ನೇ ಸಾಲಿನ ಮುಂಗಾರು ಹಂಗಾಮಿನ ರೈತರ ನೋಂದಣಿ ಅವಧಿಯನ್ನು ಇದೇ ೧೫ರವರೆಗೆ ವಿಸ್ತರಿಸುವಂತೆ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಕೇಂದ್ರ ಸರ್ಕಾರವನ್ನು ಒತ್ತಾಯಿಸಿದ್ದಾರೆ. ಈ ಕುರಿತು ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಅವರಿಗೆ ಪತ್ರ ಬರೆದಿರುವ ಪ್ರಭಾಮಲ್ಲಿಕಾರ್ಜುನ್ ರಾಜ್ಯದ ತೋಟಗಾರಿಕೆ ಇಲಾಖೆ ಸಲ್ಲಿಸಿರುವ ಪ್ರಸ್ತಾವನೆಯನ್ನು ತುರ್ತಾಗಿ ಅನುಮೋದಿಸಬೇಕು ಎಂದು ಮನವಿ ಮಾಡಿದ್ದಾರೆ. ಆನ್‌ಲೈನ್ ನೋಂದಣಿಯಲ್ಲಿ ತಾಂತ್ರಿಕ ದೋಷಗಳು ಉಂಟಾಗಿದ್ದರಿಂದ ಹಾಗೂ ಸರ್ಕಾರಿ ರಜೆಗಳು ಬಂದಿದ್ದರಿಂದ ಅನೇಕ ಅರ್ಹ ರೈತರಿಗೆ ನಿಗದಿತ ಅವಧಿಯೊಳಗೆ ನೋಂದಣಿ ಮಾಡಿಕೊಳ್ಳಲು ಸಾಧ್ಯವಾಗಿಲ್ಲ. ಈ ಹಿನ್ನೆಲೆಯಲ್ಲಿ ಜೂನ್ ೩೦ರ ಗಡುವನ್ನು ಇದೇ ೧೫ರವರೆಗೆ ವಿಸ್ತರಿಸುವುದು ಅಗತ್ಯವಾಗಿದೆ ಎಂದು ಪತ್ರದಲ್ಲಿ ತಿಳಿಸಿದ್ದಾರೆ.

*****END*****